**All India Radio: Bangalore**
**National Bulletin In Kannada**
**31.07.2025  7.35 am**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**31.07.2025  7.35 am**

**<><><><>**

ಮುಖ್ಯಾಂಶಗಳು

೧. ಜಮ್ಮು-ಕಾಶ್ಮೀರ ಶೀಘ್ರ ಭಯೋತ್ಪಾದನೆಯಿಂದ ಮುಕ್ತ: ಕೇಂದ್ರ ಗೃಹ ಸಚಿವ ಅಮಿತ್ ಶಾ ಪ್ರತಿಪಾದನೆ

೨. ೨೦೨೬ರ ಫೆಬ್ರವರಿಯಲ್ಲಿ ದೇಶದಲ್ಲಿ ಎಐ ಇಂಪ್ಯಾಕ್ಟ್ ಶೃಂಗಸಭೆ ಆಯೋಜನೆ: ಕೇಂದ್ರ ಸಚಿವ ಅಶ್ವಿನಿ ವೈಷ್ಣವ್

೩. ಬ್ಯಾಂಕಿಂಗ್ ಕಾನೂನುಗಳ ತಿದ್ದುಪಡಿ ಕಾಯ್ದೆ-೨೦೨೫ ನಾಳೆಯಿಂದ ಜಾರಿಗೆ

೪. ಟೆಸ್ಟ್ ಕ್ರಿಕೆಟ್: ಭಾರತ-ಇಂಗ್ಲೆಂಡ್ ಸರಣಿಯ ಅಂತಿಮ ಟೆಸ್ಟ್ ಪಂದ್ಯ ಇಂದಿನಿಂದ ಆರಂಭ

><><><><***<><><><><><

ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರದ ಅಡಿಯಲ್ಲಿ ಜಮ್ಮು ಮತ್ತು ಕಾಶ್ಮೀರ ಶೀಘ್ರ ಭಯೋತ್ಪಾದನೆಯಿಂದ ಮುಕ್ತವಾಗಲಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಪ್ರತಿಪಾದಿಸಿದರು. ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿ ಭಾರತದ ಬಲವಾದ, ಯಶಸ್ವಿ ಮತ್ತು ನಿರ್ಣಾಯಕ ಆಪರೇಷನ್ ಸಿಂದೂರ ಕುರಿತು ರಾಜ್ಯಸಭೆಯಲ್ಲಿ ನಿನ್ನೆ ನಡೆದ ಚರ್ಚೆಗೆ ಉತ್ತರಿಸಿದ ಸಚಿವರು, ಭಯೋತ್ಪಾದಕರ ವಿರುದ್ಧ ಬಲವಾದ ಕ್ರಮ ಕೈಗೊಳ್ಳಲಾಗುವುದು ಮತ್ತು ಭಯೋತ್ಪಾದಕ ಮೂಲಸೌಕರ್ಯವನ್ನು ಧ್ವಂಸಗೊಳಿಸಲಾಗುವುದು ಎಂದು ಹೇಳಿದರು. ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಭಾಗಿಯಾಗಿದ್ದ ಮೂವರು ಭಯೋತ್ಪಾದಕರನ್ನು 'ಆಪರೇಷನ್ ಮಹಾದೇವ್' ಕಾರ್ಯಾಚರಣೆಯಡಿ ಹೊಡೆದುರುಳಿಸಿದ ಸಶಸ್ತ್ರ ಪಡೆಗಳು ಮತ್ತು ಭದ್ರತಾ ಸಂಸ್ಥೆಗಳ ಪಾತ್ರವನ್ನು ಅಮಿತ್ ಶಾ ಶ್ಲಾಘಿಸಿದರು.

**ಧ್ವನಿ : ಅಮಿತ್ ಶಾ ( ೨೪ ಸೆಕೆಂಡುಗಳು)**

ಭಯೋತ್ಪಾದನಾ ದಾಳಿಯ ನಂತರ ಕೇಂದ್ರ ಸರ್ಕಾರವು ಸಿಂಧೂ ಜಲ ಒಪ್ಪಂದ ಮತ್ತು ವೀಸಾ ಸೌಲಭ್ಯ ಸ್ಥಗಿತಗೊಳಿಸುವುದು ಸೇರಿದಂತೆ ಪಾಕಿಸ್ತಾನದ ವಿರುದ್ಧ ಕಠಿಣ ಕ್ರಮಗಳನ್ನು ತೆಗೆದುಕೊಂಡಿದೆ ಎಂದರು. ಪಾಕಿಸ್ತಾನ ಆಕ್ರಮಿತ ಕಾಶ್ಮೀರ ಮತ್ತು ಪಾಕಿಸ್ತಾನದಲ್ಲಿನ ಭಯೋತ್ಪಾದಕ ಅಡಗುತಾಣಗಳನ್ನು ನಾಶ ಮಾಡಲು ಸಶಸ್ತ್ರ ಪಡೆಗಳಿಗೆ ಸಂಪೂರ್ಣ ಕಾರ್ಯಾಚರಣೆಯ ಸ್ವಾತಂತ್ರ್ಯವನ್ನು ನೀಡಲಾಗಿದೆ ಎಂದು ಸಚಿವ ಅಮಿತ್ ಶಾ ಹೇಳಿದರು. ಆಪರೇಷನ್ ಸಿಂದೂರ್ ಕಾರ್ಯಾಚರಣೆ ಅಡಿಯಲ್ಲಿ ನೂರಕ್ಕೂ ಹೆಚ್ಚು ಭಯೋತ್ಪಾದಕರನ್ನು ತಟಸ್ಥಗೊಳಿಸಲಾಯಿತು ಮತ್ತು ಭಯೋತ್ಪಾದಕ ಶಿಬಿರಗಳನ್ನು ನಾಶಪಡಿಸಲಾಯಿತು. ಪಾಕಿಸ್ತಾನದ ಕಡೆಯವರು ಭಾರತವನ್ನು ಸಂಪರ್ಕಿಸಿ, ಕಾರ್ಯಾಚರಣೆಯನ್ನು ನಿಲ್ಲಿಸುವಂತೆ ಭಾರತದ ಕಡೆಯವರನ್ನು ಬೇಡಿಕೊಂಡರು ಎಂದು ತಿಳಿಸಿದರು. ಕಾಂಗ್ರೆಸ್ ತನ್ನ ಮತ ಬ್ಯಾಂಕ್ ಮತ್ತು ಓಲೈಕೆ ರಾಜಕೀಯಕ್ಕಾಗಿ ಭಯೋತ್ಪಾದನೆಯ ಬಗ್ಗೆ ಮೃದು ಧೋರಣೆ ತಳೆದಿದೆ. ಭಯೋತ್ಪಾದಕರು ಪಾಕಿಸ್ತಾನದಿಂದ ಬಂದವರು ಎಂಬುದಕ್ಕೆ ಕೇಂದ್ರದ ಮಾಜಿ ಗೃಹ ಸಚಿವ ಪಿ.ಚಿದಂಬರಂ ಪುರಾವೆ ಕೇಳುತ್ತಿದ್ದಾರೆ. ಚಿದಂಬರಂ ಅವರ ಹೇಳಿಕೆಯು ಭಯೋತ್ಪಾದಕ ಸಂಘಟನೆಗಳನ್ನು ರಕ್ಷಿಸುವ ಕಾಂಗ್ರೆಸ್ ಪಕ್ಷದ ಮನಸ್ಥಿತಿಯನ್ನು ಪ್ರತಿಬಿಂಬಿಸುತ್ತದೆ ಎಂದು ಸಚಿವ ಅಮಿತ್ ಶಾ ಆರೋಪಿಸಿದರು.

><><><><***<><><><><><

ಭಾರತವು ೨೦೨೬ ರ ಫೆಬ್ರವರಿಯಲ್ಲಿ ಎಐ ಇಂಪ್ಯಾಕ್ಟ್ ಶೃಂಗಸಭೆಯನ್ನು ಆಯೋಜಿಸಲಿದೆ. ಕೃತಕ ಬುದ್ಧಿಮತ್ತೆಯನ್ನು ಸಾರ್ವಜನಿಕ ಒಳಿತಿಗಾಗಿ ಪ್ರಯೋಜನಕಾರಿಯಾಗಿಸಲು ಭಾರತದ ಬದ್ಧತೆಯನ್ನು ಇದು ಎತ್ತಿ ತೋರುತ್ತದೆ. ಈ ಕುರಿತು ಸಂಸತ್ತಿಗೆ ಮಾಹಿತಿ ನೀಡಿದ ಕೇಂದ್ರ ಎಲೆಕ್ಟ್ರಾನಿಕ್ಸ್

ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್, ಈ ಶೃಂಗಸಭೆಯು ಸಮಾಜದ ಎಲ್ಲಾ ವರ್ಗಗಳಿಗೆ ಸೇವೆ ಸಲ್ಲಿಸಲು ತಂತ್ರಜ್ಞಾನವನ್ನು ಬಳಸುವ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ದೃಷ್ಟಿಕೋನಕ್ಕೆ ಹೊಂದಿಕೆಯಾಗುತ್ತದೆ ಎಂದು ಹೇಳಿದರು. ಆರೋಗ್ಯ, ರಕ್ಷಣೆ, ಶಿಕ್ಷಣ, ಕೃಷಿ, ಹವಾಮಾನ ಬದಲಾವಣೆ ಮತ್ತು ಆಡಳಿತದಂತಹ ಕ್ಷೇತ್ರಗಳಲ್ಲಿ ನೈಜ ಜಗತ್ತಿನ ಸವಾಲುಗಳನ್ನು ಎದುರಿಸಲು ಎಐ ಅನ್ನು ಬಳಸಿಕೊಳ್ಳುವತ್ತ ಈ ಕಾರ್ಯಕ್ರಮ ಗಮನಹರಿಸಲಿದೆ ಎಂದು ಅವರು ತಿಳಿಸಿದರು.

><><><><>***<><><><><><

ದೇಶೀಯವಾಗಿ ಅಭಿವೃದ್ಧಿಪಡಿಸಲಾದ ರೈಲು ಸುರಕ್ಷತಾ ವ್ಯವಸ್ಥೆಯ ಮುಂದುವರಿದ ಆವೃತ್ತಿಯಾದ ಕವಚ್ ೪.೦, ಕೋಟಾ-ಮಥುರಾ ವಿಭಾಗದಲ್ಲಿ ಕಾರ್ಯಾರಂಭ ಮಾಡಲು ಸಿದ್ಧವಾಗಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಲೋಕಸಭೆಯಲ್ಲಿ ನಿನ್ನೆ ಈ ಕುರಿತು ಮಾಹಿತಿ ನೀಡಿದ ಅವರು, ದೇಶದಲ್ಲಿ ರೈಲ್ವೆ ಸುರಕ್ಷತಾ ವ್ಯವಸ್ಥೆಗಳ ಆಧುನೀಕರಣದತ್ತ ಇದು ಮಹತ್ವದ ಹೆಜ್ಜೆಯಾಗಿದೆ ಎಂದರು. ಕವಚ್ ೪.೦ ಕಾರ್ಯಾರಂಭವನ್ನು ಬಹಳ ಕಡಿಮೆ ಅವಧಿಯಲ್ಲಿ ಸಾಧಿಸಲಾಗಿದೆ. ಪ್ರಧಾನಿ ನರೇಂದ್ರ ಮೋದಿಯವರ ಆತ್ಮನಿರ್ಭರ ಭಾರತ್ ದೃಷ್ಟಿಕೋನದಿಂದ ಪ್ರೇರಿತವಾಗಿ ರೈಲ್ವೆ ಇಲಾಖೆಯಿಂದ ಕವಚ್ ಸ್ವಯಂಚಾಲಿತ ರೈಲು ರಕ್ಷಣಾ ವ್ಯವಸ್ಥೆಯನ್ನು ಸ್ಥಳೀಯವಾಗಿ ವಿನ್ಯಾಸಗೊಳಿಸಿ, ಅಭಿವೃದ್ಧಿಪಡಿಸಿ, ತಯಾರಿಸಲಾಗಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇದರು.

><><><><>***<><><><><><

ಬ್ಯಾಂಕಿಂಗ್ ವಲಯದಲ್ಲಿ ಆಡಳಿತ ಗುಣಮಟ್ಟವನ್ನು ಸುಧಾರಿಸುವ ಮತ್ತು ಠೇವಣಿದಾರರು ಮತ್ತು ಹೂಡಿಕೆದಾರರಿಗೆ ವರ್ಧಿತ ರಕ್ಷಣೆಯನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ಹೊಂದಿರುವ ಬ್ಯಾಂಕಿಂಗ್ ಕಾನೂನುಗಳ ತಿದ್ದುಪಡಿ ಕಾಯ್ದೆ-೨೦೨೫ ನಾಳೆಯಿಂದ ಜಾರಿಗೆ ಬರಲಿದೆ. ಈ ವರ್ಷದ ಏಪ್ರಿಲ್ ೧೫ ರಂದು ಅಧಿಸೂಚನೆಗೊಂಡ ಈ ಕಾಯ್ದೆಯು ಸಾರ್ವಜನಿಕ ವಲಯದ ಬ್ಯಾಂಕುಗಳಲ್ಲಿ ಲೆಕ್ಕಪರಿಶೋಧನಾ ಗುಣಮಟ್ಟವನ್ನು ಸುಧಾರಿಸಲು ಮತ್ತು ಸಹಕಾರಿ ಬ್ಯಾಂಕುಗಳಲ್ಲಿ ನಿರ್ದೇಶಕರ ಅಧಿಕಾರಾವಧಿಯನ್ನು ಹೆಚ್ಚಿಸಲು ಪ್ರಯತ್ನಿಸುತ್ತದೆ ಎಂದು ಕೇಂದ್ರ ಹಣಕಾಸು ಸಚಿವಾಲಯ ತಿಳಿಸಿದೆ.

><><><><>***<><><><><><

ನವದೆಹಲಿಯಲ್ಲಿ ನಡೆದ ೧೩ನೇ ಭಾರತ-ಯುಎಇ ಜಂಟಿ ರಕ್ಷಣಾ ಸಹಕಾರ ಸಮಿತಿ ಸಭೆಯಲ್ಲಿ ಭಾರತ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್ ದ್ವಿಪಕ್ಷೀಯ ರಕ್ಷಣಾ ಸಹಕಾರವನ್ನು ಬಲಪಡಿಸುವ ಬದ್ಧತೆಯನ್ನು ಪುನರುಚ್ಚರಿಸಿದವು. ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ಮತ್ತು ಯುಎಇ ರಕ್ಷಣಾ ಕಾರ್ಯದರ್ಶಿ ಲೆಫ್ಟಿನೆಂಟ್ ಜನರಲ್ ಇಬ್ರಾಹಿಂ ನಾಸರ್ ಅಲಾವಿ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಸಭೆಯಲ್ಲಿ, ವ್ಯಾಪಾರ, ಹೂಡಿಕೆ ಮತ್ತು ಸಾಮಾಜಿಕ ಸಂಬಂಧಗಳಂತಹ ಕ್ಷೇತ್ರಗಳಲ್ಲಿ ಬೆಳೆಯುತ್ತಿರುವ ಆವೇಗಕ್ಕೆ ಅನುಗುಣವಾಗಿ ರಕ್ಷಣಾ ಸಂಬಂಧಗಳನ್ನು ಹೆಚ್ಚಿಸಲು ಎರಡೂ ಕಡೆಯವರು ಒಪ್ಪಿಕೊಂಡರು.

><><><><>***<><><><><><

ರಾಷ್ಟ್ರವು ಇಂದು ಮಹಾನ್ ಕ್ರಾಂತಿಕಾರಿ ಶಹೀದ್ ಉಧಮ್ ಸಿಂಗ್ ಅವರ ೮೬ನೇ ಹುತಾತ್ಮ ದಿನದಂದು ಅವರಿಗೆ ಗೌರವ ಸಲ್ಲಿಸುತ್ತದೆ. ಘಾದರ್ ಪಕ್ಷ ಮತ್ತು ಹಿಂದೂಸ್ತಾನ್ ಸೋಷಿಯಲಿಸ್ಟ್ ರಿಪಬ್ಲಿಕ್ ಅಸೋಸಿಯೇಷನ್‌ಗೆ ಸೇರಿದ ಅವರು, ೧೯೧೯ ರಲ್ಲಿ ಅಮೃತಸರದಲ್ಲಿ ನಡೆದ ಜಲಿಯನ್ ವಾಲಾ ಬಾಗ್ ಹತ್ಯಾಕಾಂಡಕ್ಕೆ ಪ್ರತೀಕಾರವಾಗಿ ೧೯೪೦ರ ಮಾರ್ಚ್ ೧೩ ರಂದು ಬ್ರಿಟಿಷ್ ಪಂಜಾಬ್‌ನ ಮಾಜಿ ಲೆಫ್ಟಿನೆಂಟ್ ಗವರ್ನರ್ ಮೈಕೆಲ್ ಒಡ್ವೈಯರ್ ಅವರನ್ನು ಹತ್ಯೆ ಮಾಡಿದ್ದರು.

><><><><>***<><><><><><

ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ ೨೦ನೇ ಕಂತನ್ನು ಆಗಸ್ಟ್ ೨ ರಂದು ಬಿಡುಗಡೆ ಮಾಡಲು ನಿರ್ಧರಿಸಲಾಗಿದೆ. ಈ ಕುರಿತಂತೆ ತೀರ್ಮಾನಿಸಲು ನವದೆಹಲಿಯಲ್ಲಿ ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌವ್ಹಾಣ್ ನೇತೃತ್ವದಲ್ಲಿ ಉನ್ನತ ಮಟ್ಟದ ಸಭೆ ನಡೆಯಿತು. ಈ ಯೋಜನೆಯ ಪ್ರಯೋಜನ ಅತಿಹೆಚ್ಚು ರೈತರಿಗೆ ತಲುಪುವುದನ್ನು ಖಚಿತಪಡಿಸಲು ಕೈಗೊಳ್ಳಬೇಕಾದ ಕ್ರಮಗಳ

ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.  ಆಗಸ್ಟ್ ೨ ರಂದು ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಉತ್ತರ ಪ್ರದೇಶದ ವಾರಾಣಸಿಯಲ್ಲಿ ಕಾರ್ಯಕ್ರಮ ನಡೆಯಲಿದೆ. ಸಭೆಯಲ್ಲಿ ರೈತರನ್ನು ರಾಷ್ಟ್ರ, ರಾಜ್ಯ, ಜಿಲ್ಲೆ ಮತ್ತು ಗ್ರಾಮ ಮಟ್ಟದಲ್ಲಿ ಕಾರ್ಯಕ್ರಮದೊಂದಿಗೆ ಜೋಡಿಸಲು ಅಧಿಕಾರಿಗಳಿಗೆ ನಿರ್ದೇಶಿಸಿದ ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌವ್ಹಾಣ್, ರಾಷ್ಟ್ರಮಟ್ಟದ ಅಭಿಯಾನವಾಗಿ ಈ ಕಾರ್ಯಕ್ರಮವನ್ನು ಆಯೋಜಿಸುವಂತೆ ಸೂಚಿಸಿದರು. ಪಿಎಂ ಕಿಸಾನ್ ಯೋಜನೆಯಡಿಯಲ್ಲಿ ೬ ಸಾವಿರ ರೂಪಾಯಿಯನ್ನು ೩ ಕಂತುಗಳಲ್ಲಿ ೪ ತಿಂಗಳಿಗೆ ೧ ಕಂತಿನಂತೆ ರೈತರ ಖಾತೆಗಳಲ್ಲಿ ಜಮಾ ಮಾಡಲಾಗುತ್ತಿದೆ ಎಂದು ಸಚಿವರು ಮಾಹಿತಿ ನೀಡಿದರು.

><><><><>***<><><><><><

ದೇಶದಲ್ಲಿ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಇದೇ ಮೊದಲ ಬಾರಿ ನಡೆಯುತ್ತಿಲ್ಲ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ನವದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಈ ಮೊದಲು ೨೦೦೩ರಲ್ಲಿ ಸೇರಿದಂತೆ ಹಲವು ಬಾರಿ ನಡೆಸಲಾಗಿದೆ. ಚುನಾವಣಾ ಆಯೋಗ ಒಂದು ಸ್ವತಂತ್ರಸಂಸ್ಥೆಯಾಗಿದ್ದು, ಈ ಪರಿಷ್ಕರಣೆಯನ್ನು ತಂತ್ರಜ್ಞಾನದ ಸಹಾಯದೊಂದಿಗೆ ವೈಜ್ಞಾನಿಕವಾಗಿ ನಡೆಸಲಾಗುತ್ತಿರುವುದರಿಂದ ಯಾವುದೇ ಆತಂಕ ಪಡುವ ಅಗತ್ಯವಿಲ್ಲ ಎಂದರು.

><><><><>***<><><><><><

ಲಂಡನ್‌ನ ಓವಲ್ ಮೈದಾನದಲ್ಲಿ ಇಂದು ಭಾರತ ಮತ್ತು ಇಂಗ್ಲೆಂಡ್ ನಡುವೆ ಐದು ಪಂದ್ಯಗಳ ಆಂಡರ್ಸನ್-ತೆಂಡೂಲ್ಕರ್ ಟೆಸ್ಟ್ ಸರಣಿಯ ೫ನೇ ಮತ್ತು ಅಂತಿಮ ಟೆಸ್ಟ್ ಪಂದ್ಯ ನಡೆಯಲಿದೆ.

ಪಂದ್ಯವು ಭಾರತೀಯ ಕಾಲಮಾನ ಮಧ್ಯಾಹ್ನ ೩:೩೦ ಕ್ಕೆ ಪ್ರಾರಂಭವಾಗಲಿದೆ. ಪ್ರಸ್ತುತ ಸರಣಿಯಲ್ಲಿ ಭಾರತವು ೨-೧ ರಿಂದ ಹಿನ್ನಡೆಯಲ್ಲಿದೆ. ಸರಣಿ ಸಮಬಲಗೊಳಿಸಲು ಈ ಪಂದ್ಯ ಭಾರತಕ್ಕೆ ನಿರ್ಣಾಯಕವಾಗಿದೆ. ಗಾಯಗೊಂಡ ರಿಷಭ್ ಪಂತ್ ಬದಲಿಗೆ ಧ್ರುವ್ ಜುರೆಲ್ ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ವೇಗದ ಬೌಲರ್ ಆಕಾಶ್ ದೀಪ್ ಆಡುವ ಹನ್ನೊಂದರಲ್ಲಿ ಸ್ಥಾನ ಪಡೆಯುವ  ನಿರೀಕ್ಷೆ ಇದೆ. ಇನ್ನು ವೇಗಿ ಜಸ್ಪ್ರೀತ್ ಬುಮ್ರಾ ಅವರಿಗೆ ವಿಶ್ರಾಂತಿ ನೀಡುವ ಸಾಧ್ಯತೆಯಿದ್ದು, ನಾಯಕ ಶುಭಮನ್ ಗಿಲ್ ಅಂತಿಮ ತಂಡವನ್ನು ಇನ್ನೂ ಬಹಿರಂಗಪಡಿಸಿಲ್ಲ. ಇಂಗ್ಲೆಂಡ್ ತಂಡದಲ್ಲಿ ನಾಯಕ ಬೆನ್ ಸ್ಟೋಕ್ಸ್ ಪಂದ್ಯದಿಂದ ಹೊರಗುಳಿದ ಕಾರಣ, ಓಲಿ ಪೋಪ್ ತನ್ನ ತವರು ಮೈದಾನದಲ್ಲಿ ತಂಡವನ್ನು ಮುನ್ನಡೆಸಲಿದ್ದಾರೆ.

><><><><>***<><><><><><

೧೯ ವರ್ಷದೊಳಗಿನ ಭಾರತೀಯ ಕ್ರಿಕೆಟ್ ತಂಡವು ಸೆಪ್ಟೆಂಬರ್ ೨೧ ರಿಂದ ಆಸ್ಟ್ರೇಲಿಯಾ ಪ್ರವಾಸ ಕೈಗೊಳ್ಳಲಿದ್ದು, ತಂಡವನ್ನು ಆಯುಷ್ ಮ್ಹಾತ್ರೆ ಮುನ್ನಡೆಸಲಿದ್ದಾರೆ. ಭಾರತವು ಆಸ್ಟ್ರೇಲಿಯಾ ತಂಡದ ವಿರುದ್ಧ ಮೂರು ಏಕದಿನ ಪಂದ್ಯಗಳು ಮತ್ತು ಎರಡು ನಾಲ್ಕು ದಿನಗಳ ಟೆಸ್ಟ್ ಪಂದ್ಯಗಳನ್ನು ಆಡಲಿದೆ.

><><><><>***<><><><><><